ಸಂಪುಟ 01 | ಸಂಚಿಕೆ 67 | ಶನಿವಾರ 17 ಜನವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಬೆಂಜಮಿನ್ ಫ್ರಾಂಕ್ಲಿನ್ ದಿನ

ಪ್ರತಿ ವರ್ಷ ಜನವರಿ 17 ರಂದು, ಅವರ ಜನ್ಮದಿನದಂದು, ಯುನೈಟೆಡ್ ಸ್ಟೇಟ್ಸ್‌ನ ಪ್ರಮುಖ ಸ್ಥಾಪಕ ಪಿತಾಮಹರಲ್ಲಿ ಒಬ್ಬರನ್ನು ಗೌರವಿಸಲು ಬೆಂಜಮಿನ್ ಫ್ರಾಂಕ್ಲಿನ್ ದಿನವನ್ನು ಆಚರಿಸಲಾಗುತ್ತದೆ. ಅಮೆರಿಕದ ಅತ್ಯಂತ ಪ್ರಸಿದ್ಧ ಮತ್ತು ಮಹತ್ವದ ವ್ಯಕ್ತಿಗಳಲ್ಲಿ ಒಬ್ಬರನ್ನು ಗುರುತಿಸಲು ಮತ್ತು ಅವರ ಅನೇಕ ಸಾಧನೆಗಳು ಮತ್ತು ಪ್ರಪಂಚದ ಮೇಲೆ ಅವರು ಬೀರಿದ ಪ್ರಭಾವವನ್ನು ನೆನಪಿಸಿಕೊಳ್ಳುವ ಸಮಯ ಇದು.

## ಸುಭಾಷಿತ

ಇನ್ನೊಬ್ಬರನ್ನು ನಗಿಸಿ ನಗು ಆದರೆ ನೋಯಿಸಿ ನಗಬೇಡ

ಚಾರ್ಲಿ ಚಾಪ್ಲಿನ್

# ಮುಖ್ಯಮಂತ್ರಿ ಸ್ಥಾನದ ಕುರಿತು ಬಹಿರಂಗ ಚರ್ಚೆ ಮಾಡಲ್ಲ :ಡಿಕೆಶಿ

**ನವದೆಹಲಿ: ಮುಖ್ಯಮಂತ್ರಿ ಸ್ಥಾನ ಕುರಿತು ಬಹಿರಂಗವಾಗಿ ಚರ್ಚೆ ನಡೆಸುವುದಿಲ್ಲ ಎಂದು ಹೇಳುವ ಮೂಲಕ ಕಾಂಗ್ರೆಸ್ ನಲ್ಲಿ ಕುರ್ಚಿ ಕಿತ್ತಾಟ ಚಾಲ್ತಿಯಲ್ಲಿ ಇರುವುದಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತಷ್ಟು ತುಪ್ಪ ಸುರಿದಿದ್ದಾರೆ.**

ದೆಹಲಿ ಭೇಟಿ ಕೈಗೊಂಡಿರುವ ಅವರು, ಸುದ್ದಿಗಾರರೊಂದಿಗೆ ಮಾತನಾಡುವ ವೇಳೆಯಲ್ಲಿ ಅಧಿಕಾರ ಹಂಚಿಕೆ ಅಡ್ಡಗೋಡೆಯ ಮೇಲೆ ದೀಪವಿಟ್ಟಂತೆ ಮಾತನಾಡಿದ್ದಾರೆ. ಮೈಸೂರಿನಲ್ಲಿ ರಾಹುಲ್ ಗಾಂಧಿ ಅವರ ಜೊತೆ ಸಿಎಂ ಸ್ಥಾನದ ಬಗ್ಗೆ ಚರ್ಚೆ ಮಾಡಲಾಯಿತೇ, ಮುಖ್ಯಮಂತ್ರಿ ಹುದ್ದೆ ದೊರೆಯಲಿದೆಯೇ ಎಂಬ ಪ್ರಶ್ನೆಗೆ ಸ್ಪಷ್ಟ ಉತ್ತರ ನೀಡದ ಅವರು, ಮುಖ್ಯಮಂತ್ರಿ ಸ್ಥಾನ ಹೈಕಮಾಂಡ್ ಹಾಗೂ ನನ್ನ ನಡುವಣ ವಿಚಾರ. ಇದು ಸಾರ್ವಜನಿಕವಾಗಿ ಚರ್ಚೆ ಮಾಡುವ ವಿಷಯವಲ್ಲ ಎಂದಿದ್ದಾರೆ. ಮೊದಲಿನಿಂದಲೂ ಮುಖ್ಯಮಂತ್ರಿ



ಹುದ್ದೆಯ ಮೇಲೆ ಕಣ್ಣಿಟ್ಟಿರುವ ಡಿ.ಕೆ.ಶಿವಕುಮಾರ್ ಕುರ್ಚಿಗಿಟ್ಟಿಸಿಕೊಳ್ಳಲು ಸತತ ಪ್ರಯತ್ನ ನಡೆಸುತ್ತಲೇ ಇದ್ದಾರೆ.

ಅಧಿಕಾರ ಹಂಚಿಕೆಯ ಕು- ರಿತು ಸೃಷ್ಟಿಯಾಗುತ್ತಿರುವ ರಾಜಕೀಯ ವದಂತಿಗಳನ್ನು ಅಲ್ಲಗಳೆಯುವ ಬದಲಿಗೆ ನನ್ನ ಮತ್ತು ಹೈಕಮಾಂಡ್ ನಡುವಣ ವಿಷಯ ಎನ್ನುವ ಮೂಲಕ ಮತ್ತಷ್ಟು ಅನುಮಾನಗಳನ್ನು ಹುಟ್ಟು ಹಾಕಿದ್ದಾರೆ. ಅಸ್ಸಾಂ ಚುನಾವಣೆ ಸಂಬಂಧ ಹೈಕಮಾಂಡ್ ನಾಯಕರ ಜತೆ ಸಭೆ ಇದೆ, ಈ ಸಭೆಯ ಯೋಜನೆಗಳೇನು ಎಂದು ಕೇಳಿದಾಗ, ನಮ ಪಕ್ಷದ ಯೋಜನೆಗಳನ್ನು ಬಹಿರಂಗಪಡಿಸಲು ಹೇಗೆ ಸಾಧ್ಯ ಇದನ್ನು ಪಕ್ಷದ ಮಟ್ಟದಲ್ಲಿ ಮಾತ್ರ ಚರ್ಚೆ ಮಾಡಲಾಗುವುದು. ಸಾರ್ವಜನಿಕವಾಗಿ ಅಲ್ಲ ಎಂದಿದ್ದಾರೆ. ಏನಾದರೂ ಮಾಹಿತಿ ನೀಡುವುದಿದ್ದರೆ, ನಮ್ಮ ಪಕ್ಷದ ಪ್ರಧಾನ ಕಾರ್ಯದರ್ಶಿಗಳು ಇದ್ದಾರೆ, ಅವರು ನೀಡುತ್ತಾರೆ. ದೆಹಲಿಯ ಪ್ರವಾಸದಲ್ಲಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡುತ್ತೇನೆ. ನಾಯಕರನ್ನು ಭೇಟಿ ಮಾಡುವ ಉದ್ದೇಶದಿಂದಲೇ ದೆಹಲಿಗೆ ಬಂದಿದ್ದೇನೆ, ನೋಡೋಣ ಎಂದರು. ರಾಜ್ಯದ ನಿರಾವರಿ ವಿಷಯವಾಗಿ ಹಲವಾರು ಪ್ರಕರಣಗಳು ನ್ಯಾಯಾಲಯದ ವಿಚಾರಣೆಯಲ್ಲಿವೆ. ಈ ಸಂಬಂಧಪಟ್ಟಂತೆ ಕೇಂದ್ರ ಕಾನೂನು ಸಚಿವರು ಮತ್ತು ಕಾನೂನು ತಜ್ಞರನ್ನು ಭೇಟಿ ಮಾಡುತ್ತೇನೆ ಎಂದಿದ್ದಾರೆ.

## ಸಚಿವರಾದ ಸತೀಶ್ ಜಾರಕಿಹೊಳಿ ಮಹದೇವಪ್ಪ ಮಹತ್ವದ ಮೀಟಿಂಗ್

❏ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ವಿದೇಶಿ ಪ್ರವಾಸದಿಂದ ವಾಪಸ್ಸಾದ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ಭೇಟಿ ಮಾಡಿ ಚರ್ಚೆ ನಡೆಸಿದ್ದಾರೆ. ನಗರದ ಶಿವಾನಂದ ವೃತ್ತದ ಬಳಿ ಹೆಚ್.ಸಿ. ಮಹದೇವಪ್ಪ ಮತ್ತು ಸತೀಶ್ ಜಾರಕಿಹೊಳಿ ಅವರ ಸರ್ಕಾರಿ ನಿವಾಸಗಳು ಅಕ್ಕಪಕ್ಕದಲ್ಲಿವೆ. ಇಬ್ಬರು ನಾಯಕರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರಮಾಪ್ತ ಬಣದಲ್ಲಿ ಗುರುತಿಸಿಕೊಂಡಿದ್ದಾರೆ.**



ಒಂದು ವಾರದಿಂದ ದಕ್ಷಿಣ ಆಫ್ರಿಕಾದ ಪ್ರವಾಸದಲ್ಲಿದ್ದ ಸತೀಶ್ ಜಾರಕಿಹೊಳಿ ಬೆಂಗಳೂರಿಗೆ ವಾಪಾಸ್ಸಾಗಿದ್ದಾರೆ. ಇಂದು ಬೆಳಿಗ್ಗೆ ಮಹದೇವಪ್ಪ ಅವರು, ಜಾರಕಿಹೊಳಿಯವರ ಮನೆಗೆ ಭೇಟಿ ನೀಡಿ ಮಾತುಕತೆ ನಡೆಸಿದ್ದಾರೆ. ಮುಖ್ಯಮಂತ್ರಿ ಹುದ್ದೆಯ ಪ್ರಬಲ ಆಕಾಂಕ್ಷಿಯಾಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿಗೆ ತೆರಳಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರನ್ನು ಭೇಟಿ ಮಾಡುವ ಸಂದರ್ಭದಲ್ಲಿ, ಇತ್ತ ಬೆಂಗಳೂ- ರಿನಲ್ಲಿ ಮಹದೇವಪ್ಪ ಮತ್ತು ಸತೀಶ್ ಜಾರಕಿಹೊಳಿಯವರ ಭೇಟಿ ಗಮನ ಸೆಳೆದಿದೆ. ಸಿದ್ದರಾಮಯ್ಯ ಅವರು 5 ವರ್ಷ ಮುಖ್ಯಮಂತ್ರಿಯಾಗಿರಬೇಕು.

## ರಾಯಚೂರು ಜಿಲ್ಲಾ ಉತ್ಸವದ ಕಾರ್ಯಕ್ರಮಗಳು ಫೆಬ್ರವರಿ 5, 6, 7ರವರೆಗೆ ನಿರಂತರ ನಡೆಯಲಿ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 16 (ಕ.ವಾ.): ಈ ಮೊದಲು ನಿರ್ಧರಿಸಿದ್ದ ರಾಯಚೂರು ಜಿಲ್ಲಾ ಉತ್ಸವ-2026ರ ಎಲ್ಲ ಕಾರ್ಯಕ್ರಮಗಳು ಪರಿಷ್ಕೃತ ದಿನಾಂಕ 2026ರ ಫೆಬ್ರವರಿ 5, 6 ಮತ್ತು 7ರವರೆಗೆ ನಿರಂತರ ನಡೆಯುವಂತೆ ಕಾರ್ಯ ಯೋಜನೆ ರೂಪಿಸಿ ಕಾರ್ಯಪ್ರವೃತ್ತರಾಗಬೇಕು ಎಂದು ರಾಯಚೂರು ಉತ್ಸವ ಆಚರಣಾ ಸಮಿತಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಆಯಾ ಸಮಿತಿಗಳ ಅಧ್ಯಕ್ಷರು ಮತ್ತು ಸದಸ್ಯ ಕಾರ್ಯದರ್ಶಿಗಳಿಗೆ ನಿರ್ದೇಶನ ನೀಡಿದರು.**

ನಗರದ ನೂತನ ಜಿಲ್ಲಾಧಿಕಾ- ರಿಗಳ ಕಚೇರಿಯ ಸಭಾಂಗಣದಲ್ಲಿ ಜನವರಿ 16ರಂದು ನಡೆದ ಮತ್ತೊಂದು ಸುತ್ತಿನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಈಗಾಗಲೇ ಬೇರೆ ಬೇರೆ ದಿನಾಂಕದಿಂದ ನಿಗದಿಯಾದ ಕಾರ್ಯಕ್ರಮಗಳನ್ನು ಯತಾರೀತಿಯಲ್ಲಿ ನಡೆಸಬೇಕು. ಉತ್ಸವದ ಸಿದ್ಧತೆಗೆ ಇದೀಗ ಸ್ವಲ್ಪ ದಿನಗಳ ಕಾಲಾವಕಾಶ ಲಭಿಸಿದೆ. ಕೆಲವು ಸ್ಪರ್ಧೆಗಳಲ್ಲಿ ಮಾತ್ರ ಸ್ವಲ್ಪ ಮಾರ್ಪಾಡುಗಳಾಗಲಿವೆ. ಇನ್ನುಳಿದಂತೆ ಯಾವುದೇ ಬದಲಾವಣೆಗಳು ಇರುವುದಿಲ್ಲ. ಅಧಿಕಾರಿಗಳು ಮತ್ತು ಸಿಬ್ಬಂದಿ ವಿರಮಿಸದೇ ನಿರಂತರವಾಗಿ ಉತ್ಸವದ ನಾನಾ ಕಾರ್ಯಚಟುವಟಿಕೆಗಳಲ್ಲಿ ಭಾಗಿಯಾಗಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜನವರಿ 31 ರಿಂದ ಎರಡು ದಿನ ಮಕ್ಕಳ ಉತ್ಸವ: ಜನವರಿ 31 ಹಾಗೂ ಫೆಬ್ರವರಿ 1ರಂದು ಎರಡು ದಿನಗಳ ಕಾಲ ಮಕ್ಕಳ ಉತ್ಸವ ನಡೆಸಲು ತೀರ್ಮಾನಿಸಲಾಗಿದೆ. ಈ ಉತ್ಸವದಲ್ಲಿ ಜಿಲ್ಲೆಯ ಎಲ್ಲ ಪ್ರತಿಭಾನ್ವಿತ ಮಕ್ಕಳಿಗೆ ಅವಕಾಶ ಸಿಗಬೇಕು. ಈ ಉತ್ಸವದ ಬಗ್ಗೆ ವ್ಯಾಪಕ ಪ್ರಚಾರ ನಡೆಸಬೇಕು. ಸಣ್ಣ ವಯೋಮಾನದ ಮಕ್ಕಳಿಗು ಅವಕಾಶ ಸಿಗುವ ಹಾಗೆ ವಯಸ್ಸಿಗನುಸಾರ ಬೇರೆ ಬೇರೆ ಸ್ಪರ್ಧೆಗಳನ್ನು ನಡೆಸಲು ಕಾರ್ಯಯೋಜನೆ ರೂಪಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ನಿರಂತರ ಸಭೆ ನಡೆಸಿ: ಆಯಾ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯ ಕಾರ್ಯದರ್ಶಿಗಳು ತಮ್ಮ ತಮ್ಮ ಹಂತದಲ್ಲಿ ಸಭೆ ನಡೆಸಿ ಸಿದ್ಧತೆಗಳ ಬಗ್ಗೆ ಪರಿಶೀಲಿಸಬೇಕು.

ಆಯಾ ಸಮಿತಿಗಳ ಕಾರ್ಯವನ್ನು ಒಪ್ಪಿಸಿದರೆ ನಾವು ಸಹ ಸೇವೆಗೆ ಸಿದ್ಧ ಎನ್ನುವ, ಸ್ವಯಂಪ್ರೇರಿತರಾಗಿ ಕೆಲಸ ಮಾಡಲು ಇಚ್ಛಿಸುವಂತಹ ಸಂಘ ಸಂಸ್ಥೆಗಳ ಸದಸ್ಯರ ಮತ್ತು ಸ್ವಯಂ ಸೇವಕರನ್ನು ಗುರುತಿಸಿ ಅವರ ಸಹಾಯ, ಸಲಹೆ, ಸಹಕಾರ ಮತ್ತು ಸೇವೆ ಪಡೆಯಬೇಕು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸಲಹೆ ಮಾಡಿದರು.

ಸಮನ್ವಯ ಸಾಧಿಸಿ: ಯಾವುದೇ ಕಾರ್ಯ ಸಾಧನೆಗೆ ಸಮನ್ವಯ ಮುಖ್ಯ. ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಪರಸ್ಪರ ಸಮನ್ವಯ ಸಾಧಿಸಿ ಕಾರ್ಯ ನಿರ್ವಹಿಸಬೇಕು. ಪ್ರತಿಯೊಂದು ಇವೆಂಟಗೂ ಹೆಚ್ಚಿನ ಜನರು ಸೇರಿ ಯಶಸ್ವಿಯಾಗುವಂತೆ ಪ್ರಚಾರ ಕಾರ್ಯಕ್ಕೆ ಹೆಚ್ಚಿನ ಒತ್ತು ಕೊಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ, ಬಸವಣೆಪ್ಪ ಕಲಶೆಟ್ಟಿ ಹಾಗೂ ವಿವಿಧ ಸಮಿತಿಗಳ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ಇದ್ದರು.

## ವಾಲ್ಮೀಕಿ ನಾಯಕ ಮಹಾಸಭಾ ರಾಯಚೂರು ನಗರ ಘಟಕಕ್ಕೆ ಈರೇಶ ನಾಯಕ ಅಧ್ಯಕ್ಷರಾಗಿ ನೇಮಕ

❏ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಟಿಎಪಿಎಂಸಿ- ಎಸ್ ಯಲ್ಲಿ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ರಾಯಚೂರು ಜಿಲ್ಲಾ ಘಟಕದ ಅಧೀನದಲ್ಲಿರುವ ರಾಯಚೂರು ನಗರ ಘಟಕದ ಅಧ್ಯಕ್ಷರಾಗಿ ಈರೇಶ ನಾಯಕ (ರಾಯಚೂರು) ಅವರನ್ನು ನೇಮಕ ಮಾಡಲಾಗಿದೆ.**




ಈ ಕುರಿತು ಜಿಲ್ಲಾ ಅಧ್ಯಕ್ಷರಾದ ಬಿ. ರಾಮಣ್ಣ ನಾಯಕ ಅವರು ಅಧಿಕೃತ ಆದೇಶ ಹೊರಡಿಸಿದ್ದಾರೆ. ಆದೇಶದಲ್ಲಿ, ನೂತನ ಅಧ್ಯಕ್ಷರು ಸಂಘದ ಎಲ್ಲಾ ತತ್ವಸಿದ್ಧಾಂತಗಳಿಗೆ ಬದ್ಧರಾಗಿ ಕಾರ್ಯನಿರ್ವಹಿಸಬೇಕೆಂದು ಸೂಚಿಸಿ, ಸಮಾಜದ ಶೈಕ್ಷಣಿಕ, ಆರ್ಥಿಕ ಹಾಗೂ ಸಾಮಾಜಿಕ ಅಭಿವೃದ್ಧಿಗಾಗಿ ಶ್ರಮಿಸುವುದರ ಜೊತೆಗೆ ಸಂಘಟನೆಯ ಬಲವರ್ಧನೆಗೆ ಸಕ್ರಿಯವಾಗಿ ಕೈಜೋಡಿಸಬೇಕೆಂದು ತಿಳಿಸಲಾಗಿದೆ.

ಈ ಸಂದರ್ಭದಲ್ಲಿ ತಾಲೂಕು ಅಧ್ಯಕ್ಷರಾದ ದೇವರಾಜ್ ನಾಯಕ ಕರ್ನಾಟಕ ವಾಲ್ಮೀಕಿ ನಾಯಕ ಮಹಾ ಸಭಾ ಮಾನ್ವಿ, ಆಂಜನೇಯ ನಾಯಕ, ಹನುಮೇಶ ನಾಯಕ, ತಾಯಣ್ಣ ನಾಯಕ, ಹಂಪಯ್ಯ ನಾಯಕ, ಪರುಶುರಾಮ, ಮಹೇಶ ನಾಯಕ, ಜಯ ನಾಯಕ, ಮಂಜುನಾಥ ನಾಯಕ, ಯಲ್ಲಯ್ಯ ನಾಯಕ, ಸಬ್ಜೆಲಿ, ದೇವರಾಜ ನಾಯಕ ಜಾಗೀರ್ ಪನ್ನೂರು ಇನ್ನಿತರರು ಉಪಸ್ಥಿತರಿದ್ದರು.

## ಶ್ರೀಮತಿ ನಿರ್ಮಲಾ ಸಿದ್ದಪ್ಪ ಹಳ್ಳೂರ ಇವರಿಗೆ ತುಲಾಭಾರ ಕಾರ್ಯಕ್ರಮ

❏ ನೈಜ್ಯ ದೆಸೆ ನ್ಯೂಸ್

**ಶ್ರೀ ಅಮರನಾಥ ಹಳ್ಳೂರ ಮುಖ್ಯೋಪಾಧ್ಯಾಯರು ಶ್ರೀ ಬಸವೇಶ್ವರ ಸಂಂ- ಯುಕ್ತ ಪ್ರೌಢಶಾಲೆ, ಬಳಗಾನೂರ ಇವರ ಮಾತೋಶ್ರೀಯವರಾದ ಶ್ರೀಮತಿ ನಿರ್ಮಲಾ ಸಿದ್ದಪ್ಪ ಹಳ್ಳೂರ ಇವರಿಗೆ ಪರಮಪೂಜ್ಯ ಸಿದ್ದನ ಕೊಳ್ಳದ ಸ್ವಾಮಿಗಳಾದ ಡಾ. ಶಿವಕುಮಾರ್ ಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ಭಕ್ತಿಭಾವ, ಶ್ರದ್ಧೆ ಮತ್ತು ಸಂಭ್ರಮದಿಂದ ತುಲಾಭಾರ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.**

ಈ ಪವಿತ್ರ ಕಾರ್ಯಕ್ರಮದ ವೇಳೆ ಮಾತೋಶ್ರೀಯವರನ್ನು ಪೂಜ್ಯ ಸ್ವಾಮಿಗಳು ಆಶೀರ್ವದಿಸಿ, ಆಯುರಾರೋಗ್ಯ, ಕುಟುಂಬ



ಸುಖ?ಶಾಂತಿ, ಸದ್ಬುದ್ಧಿ ಹಾಗೂ ಧರ್ಮಮಾರ್ಗದಲ್ಲಿ ಮುಂದುವ- ರಿಯುವ ಶಕ್ತಿಯನ್ನು ದಯಪಾಲಿಸಿದರು. ಕುಟುಂಬದ ಸದಸ್ಯರು, ಬಂಧುಮಿತ್ರರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮದ ಗೌರವವನ್ನು ಹೆಚ್ಚಿಸಿದರು. ಈ ತುಲಾಭಾರ ಸೇವೆಯು ಕೇವಲ ಒಂದು ವಿಧಿಯಷ್ಟೇ ಅಲ್ಲದೆ, ಮಾನವ ಜೀವನದಲ್ಲಿ ತ್ಯಾಗ, ಭಕ್ತಿ ಹಾಗೂ ಸೇವಾಭಾವದ ಮಹತ್ವವನ್ನು ಸಾರುವ ದಿವ್ಯ ಅನುಭವವಾಗಿ ಮೂಡಿಬಂದಿತು. ಇಂತಹ ಸತ್ಪ್ರವೃತ್ತಿ ಕಾರ್ಯಗಳು ಸಮಾಜಕ್ಕೆ ಧಾರ್ಮಿಕ ಹಾಗೂ ನೈತಿಕ ಪ್ರೇರಣೆಯನ್ನು ನೀಡಲಿ ಎಂದು ಎಲ್ಲರೂ ಪ್ರಾರ್ಥಿಸಿದರು.

# ಬಸವಜಯಂತಿ ಆಚರಿಸಿದ ಮೊದಲಿಗರು ಮಂಜಪ್ಪನವರು: ಲೋಕೇಶ ಮಾನ್ವಿ

❏ ನೈಜ್ಯ ದೆಸೆ ನ್ಯೂಸ್

**ಅರಕೇರಾ ರಾಷ್ಟ್ರವಾದಿ ಶರಣ ಹರ್ಡೇಕರ ಮಂಜಪ್ಪನವರು ಸಮ ಸಮಾಜದ ಕನಸ್ಸು ಕಂಡ ಧೀಮಂತ,ಮಾನವತಾವಾದಿ ಕಷ್ಟದಲ್ಲೂ ಹಸಿವಿನಲ್ಲು ಊಟವಿಲ್ಲದೆಯೊ ರಾಷ್ಟ್ರೀಯತೆಯನ್ನೆ ಉಸಿರಾರಾಗಿಸಿಕೊಂಡು ಬದುಕಿದವರು.**

ಮೊಟ್ಟಮೊದಲ ಸಾರ್ವಜನಿಕವಾಗಿ ಬಸವ ಜಯಂತಿ ಆಚರಿಸಿದ ಸ್ತ್ರೀ ಸಮಾಜದ ಜಾಗೃತಿಗಾಗಿ ಅಕ್ಕಮಾದೇವಿ ಜಯಂತಿಯನ್ನು ಆರಂಭಿಸಿದ ಮಹಾತ್ಮರು ಶ್ರೇಯಸ್ಸು ಹರ್ಡೇಕರ್ ಮಂಜಪ್ಪನವರಿಗೆ ಸಲ್ಲುತ್ತದೆ ಎಂದು ಲೋಕೇಶ ಎನ್ ಮಾನ್ವಿ ಹೇಳಿದರು ಅವರು ಅರಕೇರಾ ತಾಲ್ಲೂಕಿನ ಜಾಗಿರಜಾಡಲದಿನ್ನಿ ಗ್ರಾಮದಲ್ಲಿ ನೀಲಾಂಭಿಕ ಬಸವ ಯೋಗಾಶ್ರಮ ಬಡಿಗೇರ ಮರ್ಚಗುಡ್ಡದಲ್ಲಿ ಹಮ್ಮಿಕೊಂಡಿದ್ದ 82 ನೇ ಬಸವ ತತ್ವ ಚಿಂತನ ಗೋಷ್ಠಿಯಲ್ಲಿ ಮಾತನಾಡಿ ಹರ್ಡೇಕರ ಮಂಜಪ್ಪನವರು ಬಸವಣ್ಣನವರ ದಾಸಿಪುತ್ರನಾಗಲಿ,ವೇಶಾಪುತ್ರನಾಗಲಿ ಎಂಬ



ವಚನದಿಂದ ಪ್ರಭಾವಿತರಾಗಿ ಲಿಂಗಧೀಕ್ಷೆಯನ್ನು ಪಡೆದುಕೊಂಡು ಜೀವನದ್ದಕ್ಕೂ ಬಸವತತ್ವ ಪ್ರಸಾರ ಮಾಡಿದ ಮಹಾನುಭಾವರು ಎಂದು ಹೇಳಿದರು.

ಮೊಟ್ಟಮೊದಲಿಗೆ ಬಸವದಳ ಸ್ಥಾಪನೆ ಮಾಡಿದ ಮಂಜಪ್ಪನವರು, ಮಹಾತ್ಮಗಾಂಧೀ- ಜಿಯವರಿಗೆ ಬಸವಣ್ಣನವರ ಜೀವನ ಸಂದೇಶ ಪರಿಚಯಿಸಿದರು.ಸುಮಾರು 88 ಪುಸ್ತಕಗಳನ್ನು ಬರೆದಿದ್ದ ಅವರು ತಾವೇ ಹಳ್ಳಿಗಳಲ್ಲಿ ವಿತರಿಸುವ ಮೂಲಕ ಬಸವಪ್ರಜ್ಞೆ ಮತ್ತು ರಾಷ್ಟ್ರಭಕ್ತಿ ಬೆಳೆಸುವ ಮಹಾ ಕಾರ್ಯವನ್ನು ಮಾಡಿದ್ದಾರೆಂದರು.ಸವ ಾಜಸೇವೆಕ ಮತ್ತು ಸಾಹಿತ್ಯಿ ಚಿಂತಕ ಸ್ವಾತಂತ್ರ್ಯ ಹೋರಾಟಗಾರ,ಪತ್ರಕರ್ತ ಕರ್ನಾಟಕ ಗಾಂಧಿ ಎಂದು ಹೆಸರಿಸಲಾಗುತ್ತದೆ. ಅವರು ತಮ್ಮ ಜೀವನವನ್ನು ಸಮಾಜ ಸುಧಾರಣೆ,ಸ್ವಾತಂತ್ರ ಚಳವಳಿ ಮತ್ತು ಗಾಂಧಿವಾದ ತತ್ವಗಳ ಪ್ರಸಾರಕ್ಕೆ ಸಮರ್ಪಿಸಿದರು.

ಶ್ರೀ ವೀರಭದ್ರಸ್ವಾಮಿಗಳು ನೀಲಾಂಬಿಕ ಬಸವ ಯೋಗ ಆಶ್ರಮ ಅಧ್ಯಕ್ಷರುಮಾತನಾಡಿ ಶತ ಶತಮಾನಗಳಿಂದ ಜ್ಞಾನದ ಬೆಳಕು ಚಲ್ಲಿದ ಕಯಕಯೋಗಿ ಬಸವಣ್ಣ ಕಾಯಕತ ಮಹತ್ವವನ್ನು ವಿಶ್ವಕ್ಕೆ ಸಾರಿದರು ಮತ್ತು 12 ನೇ ಶತಮಾನದ ಪ್ರಮುಖ ವಚನಕಾರರು ಬಸವಣ್ಣ,ಅಲ್ಲಮಪ್ರಭು, ಅಕ್ಕಮಹಾದೇವಿ.ಸಿದ್ದರಾಮೇಶ್ವರ,ಮಡಿವಾಲಮಚಂ ಯ್ಯ.ಅಂಬಿಗರಚೌಡಯ್ಯ, ಚೆನ್ನಬಸವಣ್ಣ,ಗಂಗಾಂಬಿಕೆ ಮುಂತಾದವರು ಇವರ ವಚನಗಳ ಮೂಲಕ ಧಾರ್ಮಿಕ ಮತ್ತು ಸಾಮಾಜಿಕ ಸುಧಾರಣಾಗಾಗಿ ಶ್ರಮಿಸಿ ಕಾಯಕವೇ ಕೈಲಾಸ,ಜಾತಿ ಇಲ್ಲದ ಭಕ್ತಿ ಮುಂತಾದ ತತ್ವಗಳನ್ನು ಸಾರಿದರು.

ಮುಂದಿನ ದಿನಗಳಲ್ಲಿದುಶ್ಚಟಗಳಾದ ಮದ್ಯಪಾನ, ಗುಟ್ಕಾ, ಬೀಡಿ, ಸೀಗರೇಟ್ ತಂಬಾಕ ಚೀಟುಗಳು, ದಾಸರಾಗಿರುವ ಜನರು ಜಾಗೃತಿ ಮೂಡಿಸಲು ಪತ್ರಿ ಮನೆ ಮನೆಗೆ ಹೋಗಿ ಸಂಚರಿಸಿ ಸ್ವಾಮಿಗಳು ಜೋಳಿಗೆ ಒಡ್ಡಿ ದುಶ್ಚಟಗಳನ್ನು ಬೀಡಿಸಲು ಜೋಳಿಗೆ ಅಭಿಯಾನ ಪ್ರಾರಂಭಿಸುವುದಾಗಿ ಸ್ವಾಮಿಗಳು ಹೇಳಿದರು. ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಉಪಾಧ್ಯಕ್ಷರಾದ ಸೂಗೂರೇಶ್ವರ ಎಸ್ ಗುಡಿ, ಲೋಕೇಶ ಮಾನ್ವಿ ಇವರುಗಳಿಗೆ ನೀಲಾಂಭಿಕ ಬಸವ ಯೋಗಾಶ್ರಮದವತಿಯಿಂದ ಸನ್ಮಾನಸಿಗೌರವಿಸಲಾಯಿತು.ಸಂದರ್ಭದ ಲ್ಲಿ. ಅಮರೇಶ ಗವಿಗಟ್ಟಿ ಬೆಟ್ಟಪ್ಪ ಕಸ್ತೂರಿ ಅತ್ತನೂರು, ಚನ್ನಪ್ಪ ಅರಸುರ ಗಲಗ,ಮಸ್ತಾನಸಾಬ ಸಿರವಾರ,ಅಮರಪ್ಪಶಾಖಾಪೂರು ಹನುಮಂತಪ್ಪ ಮಾಸ್ಟರ್ ವಾಲೇಕರ್ ಜಾಗಿರಜಾಡಲದಿನ್ನಿ, ನಾಗಯ್ಯಸ್ವಾಮಿ ಚಿಕ್ಕಮಠ,ಅಮರೇಶಬಳೆಗಾರ, ಶಿವಕುಮಾರ ಎಸ್ ಗುಡಿ,ದಾಸೋಹದ ವ್ಯವಸ್ಥೆ ಮೌನೇಶ ಬುಡಿಗಿ ಸೇರಿದಂತೆ ಸುತ್ತಮುತ್ತಲ್ಲಿನ ಶರಣ ಶರನಿಯರು ಭಾಗವಹಿಸಿದ್ದರು.

## ಸಾಹಿತ್ಯ ಸಿಂಚನ

ಮೂಕ ರಾಗ.!

ಭಾವ ವಾರಿಧಿಯ ಮೊರೆವ ಅಲೆಯೊಳಗೆ
ಅಡಗಿಹುದು ನೂರು ಬಗೆಯ ನೋವು
ಮನದ ಮಾಮರದಿ ಬಿರಿದ ಮಾವಿನೊಳು
ತುಂಬಿಹುದು ಕೋಟಿ ಕಹಿಯ ಬೇವು.!

ಬಾಳ ಬಾಂದಳದಿ ಹೊಳೆವ ತಾರೆಗಳಲು
ಆವರಿಸಿಹುದು ಕಾಡಿ ಕನಲಿಸುವ ತಮಸ್ಸು
ಭರವಸೆಯ ಬತ್ತಿ ಬೆಳಗುವ ದೀಪಗಳನು
ಮುತ್ತಿಹುದು ಕಮರಿಸುವ ಕೋಟಿ ಕನಸು.!

ಚಿತ್ತ ಅಂಗಳದ ಚೈತನ್ಯ ಕುಸುಮಗಳನು
ನಲುಗಿಸಿಹುದು ಸಹಸ್ರ ತುಮುಲ ತಲ್ಲಣ
ಧಮನಿ ಧಮನಿಯ ನೆತ್ತರ ಹೊನಲೊಳಗು
ಮಾರ್ದನಿಸಿಹುದು ಬೇಗೆ ನರಳಿಕೆ ರಿಂಗಣ.!

ಜೀವ ಶರಧಿಯ ನಂಬಿಕೆ ದೋಣಿಯನು
ಅಲುಗಿಸಿಹುದು ತರಾವರಿ ಚಂಡಮಾರುತ
ಶ್ರದ್ದೆಯಲಿ ಹುಟ್ಟು ಹಾಕುವ ಕರಗಳನು
ಸೋಲಿಸಿಹುದು ಕಾಣದ ನಿಷ್ಕಾರುಣ್ಯ ಹಸ್ತ.!

ಎದೆಯಗೂಡಿನ ಉಲಿವ ಹಕ್ಕಿ ಕಂಠವನು
ಅಮುಕಿಹುದು ಭಯ ಆತಂಕಗಳ ಬೆರಳು
ಉಲ್ಲಾಸದಿ ಗರಿ ಬಿಚ್ಚಿದ ಪಕ್ಷಿ ರೆಕ್ಕೆಗಳನು
ಕತ್ತರಿಸಿಹುದು ನಿರಾಸೆ ನೋವಿನ ಉರುಳು.!

ನಿತ್ಯವೂ ಸತ್ಯ ಮಿಥ್ಯೆಗಳ ಕಣ್ಣಾಮುಚ್ಚಾಲೆ
ಕಂಗೆಡಿಸಿಹುದು ಬಾಳಯಾನದ ದಾರಿದಿಕ್ಕು
ದಿನವೂ ಭ್ರಮೆ ವಾಸ್ತವಗಳ ತೂಗುಯ್ಯಾಲೆ
ಉಕ್ಕಿಸಿಹುದು ಒಡಲಾಳದಿ ಕಂಬನಿ ಬಿಕ್ಕು.!

ಈ ಭಾವ-ಬಂಧಗಳ ಬಣ್ಣ ರಂಗಿನಾಟದಲಿ
ಸೋಲುತಿಹುದು ನೊಂದು ಬೆಂದು ಗುಂಡಿಗೆ
ರಾಗ ವಿರಾಗ ನೆಳಲುಬೆಳಕು ಹೊಯ್ದಾಟದಲಿ
ಸಾಯುತಿಹುದು ಏಗಿ ಸಾಗಲಾಗದೆ ಅಡಿಗಡಿಗೆ.!

ಎ.ಎನ್.ರಮೇಶ್.ಗುಬ್ಬಿ.

# ರಾಯಚೂರು ಜಿಲ್ಲಾ ಉತ್ಸವ ಒಂದು ವಾರ ಮುಂದಕ್ಕೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 16 (ಕ.ವಾ.): ರಾಯಚೂರು ಜಿಲ್ಲೆಯ ಐತಿಹಾಸಿಕ ಕಲೆ, ಸಾಹಿತ್ಯ, ಸಂಸ್ಕೃತಿ ಪರಂಪರೆಯ ಅನಾವರಣ-ಕ್ಕಾಗಿ ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಜನವರಿ 29ರಿಂದ ಮೂರು ದಿನಗಳ ಕಾಲ ನಿಗದಿಯಾಗಿದ್ದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ನ್ನು ಒಂದು ವಾರಕ್ಕೆ ಮುಂದೂಡಲಾಗಿದೆ.**



ಜನವರಿ 16ರಂದು ರಾಯಚೂರು ಪ್ರವಾಸದಲ್ಲಿದ್ದ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರು, ಮಾವಿನಕೆರೆ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಾಗಿಯಾಗಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ರಾಯಚೂರು ಜಿಲ್ಲಾ ಉತ್ಸವವನ್ನು ಜನವರಿ 29, 30 ಹಾಗೂ 31ರಂದು ನಡೆಸಬೇಕು ಎಂದು ನಿರ್ಧರಿಸಿ ಸಿದ್ಧತೆ ಮಾಡಲಾಗುತ್ತಿತ್ತು. ಆದರೆ, ಜನವರಿ 22ರಿಂದ ವಿಧಾನ ಮಂಡಲ ಅಧಿವೇಶನ ನಡೆಸಬೇಕು ಎನ್ನುವ ಸಚಿವ ಸಂಪುಟದ ನಿರ್ಣಯಕ್ಕೆ ರಾಜ್ಯಪಾಲರು ಅಂಗೀಕರಿಸಿದ್ದರಿಂದಾಗಿ ಕರ್ನಾಟಕ ವಿಧಾನ ಮಂಡಲ ಕಲಾಪವು ತುರ್ತಾಗಿ ನಿಗದಿಯಾದ ಹಿನ್ನೆಲೆಯಲ್ಲಿ ಎಲ್ಲ ಸಚಿವರು ಮತ್ತು ಶಾಸಕರು ಕಲಾಪದಲ್ಲಿ ಭಾಗಿಯಾಗುತ್ತಿರುವ ಹಿನ್ನೆಲೆಯಲ್ಲಿ ಉತ್ಸವವನ್ನು ಮುಂದಿನ ತಿಂಗಳು ಫೆಬ್ರವರಿ 5ರಿಂದ ಮೂರು ದಿನಗಳ ಕಾಲ ನಡೆಸಲಾಗುವುದು ಎಂದು ಸಚಿವರು ಹೊಸ ದಿನಾಂಕ ಪ್ರಕಟಿಸಿದರು.

ಉತ್ಸವವನ್ನು ಫೆ.6ರಿಂದ ಮೂರು ದಿನಗಳ ಕಾಲ ನಡೆಸಲು ಯೋಜಿಸಲಾಗಿ-ತ್ತಾದರೂ ದಾವಣಗೆರೆ ಜಿಲ್ಲೆಯ ಹ-ರಿಹರ ತಾಲೂಕಿನ ರಾಜನಹಳ್ಳಿಯಲ್ಲಿ ಫೆ.8ರಿಂದ ವಾಲ್ಮೀಕಿ ಜಾತ್ರೋತ್ಸವ ಆಯೋಜನೆಯಾಗಿದ್ದರಿಂದಾಗಿ ಫೆ.6ರ ಬದಲಾಗಿ ಫೆ.5ರಿಂದ ಮೂರು ದಿನಗಳು ಫೆ.5, 6 ಮತ್ತು 7ರಂದು ಉತ್ಸವ ನಡೆಸಲಾಗುವುದು ಎಂದು ಸಚಿವರು ಸ್ಪಷ್ಟಪಡಿಸಿದರು.

ಈ ಸಂದರ್ಭದಲ್ಲಿ ಸಚಿವರಾದ ಎನ್.ಎಸ್.ಬೋಸರಾಜು, ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ, ಬಸನಗೌಡ ದದ್ದಲ್, ಹಂಪಯ್ಯ ನಾಯಕ, ಎ.ವಸಂತಕುಮಾರ ಹಾಗೂ ಇನ್ನಿತರ ಗಣ್ಯ ಮಹನಿಯರು ಮತ್ತು ಜಿಲ್ಲಾಧಿಕಾ-ರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಈಶ್ವರ ಕುಮಾರ ಕಾಂದೂ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಹಾಗೂ ಇತರರು ಇದ್ದರು.

## ಮಾನ್ವಿ :ಶಾರ್ಟ್ ಸರ್ಕ್ಯೂಟ್‌ನಿಂದ ಪೇಂಟ್ಸ್ ಮಳಿಗೆಯಲ್ಲಿ ಭಾರೀ ಅಗ್ನಿ ಅವಘಡ ರೂ.60 ಲಕ್ಷ ನಷ್ಟ




ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಬಸವ ವೃತ್ತದ ಅಪೂರ್ಣ ಚಿತ್ರಮಂದಿರದ ಎದುರುಗಡೆ ಇರುವ ಬಿಚ್ಚಾಲಿ ವೀರೇಶ್ ಬಾಬು ಅವರ ಮಾಲೀಕತ್ವದ ಶ್ರೀ ಲಕ್ಷ್ಮಿ ವೆಂಕಟೇಶ್ವರ ಪೇಂಟ್ಸ್ ಮಳಿಗೆಯಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದ ಭಾರೀ ಬೆಂಕಿ ಅವಘಡ ಸಂಭವಿಸಿದೆ.**



ಇಂದು ಬೆಳಿಗ್ಗೆ ಸುಮಾರು 4 ಗಂಟೆಯ ವೇಳೆಗೆ ಮಳಿಗೆಯಿಂದ ಹೊಗೆ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಸ್ಥಳೀಯರು ಅಂಗಡಿ ಮಾಲೀಕರಿಗೆ ಮಾಹಿತಿ ನೀಡಿದ್ದಾರೆ. ಮಳಿಗೆಯಲ್ಲಿ ಪೇಂಟ್ ಸೇರಿದಂತೆ ರಾಸಾಯನಿಕ ವಸ್ತುಗಳು ಸಂಗ್ರಹವಾಗಿದ್ದ ಕಾರಣ ಬೆಂಕಿ ಕ್ಷಿಪ್ರವಾಗಿ ವ್ಯಾಪಿಸಿ ತೀವ್ರವಾಗಿ ಹೊತ್ತಿ ಉರಿದಿದೆ. ಅಗ್ನಿಶಾಮಕ ದಳದವರು ಸ್ಥಳಕ್ಕೆ ಆಗಮಿಸಿ ಬೆಂಕಿ-ಯನ್ನು ನಿಯಂತ್ರಣಕ್ಕೆ ತಂದರೂ, ಅಷ್ಟರೊಳಗೆ ಮಳಿಗೆ ಸಂಪೂರ್ಣವಾಗಿ ಸುಟ್ಟು ಹೋಗಿದ್ದು ಒಳಗಿದ್ದ ಎಲ್ಲಾ ಸಾಮಗ್ರಿಗಳು ಕರಕಲಾಗಿವೆ. ಈ ಅವಘಡದಲ್ಲಿ ಅಂದಾಜು ರೂ. 60 ಲಕ್ಷ ನಷ್ಟ ಸಂಭವಿಸಿರುವುದಾಗಿ ತಿಳಿದುಬಂದಿದೆ.

ಮಳಿಗೆಯ ಅಕ್ಕಪಕ್ಕದಲ್ಲಿರುವ ಮಾರುತಿ ಬುಕ್ ಸ್ಟಾಲ್ ಹಾಗೂ ಶ್ರೀ ಜೈ ಹನುಮಾನ್ ಕಿರಾಣಿ ಸ್ಟೋರ್‌ಗಳಿಗೆ ಯಾವುದೇ ಹಾನಿ ಸಂಭವಿಸಿಲ್ಲ. ಹೆಚ್ಚಿನ ಅಪಾಯ ತಪ್ಪಿದ ಹಿನ್ನೆಲೆಯಲ್ಲಿ ಸ್ಥಳೀಯರು ನಿಟ್ಟುಸಿರು ಬಿಟ್ಟಿದ್ದಾರೆ. ಘಟನೆಯ ಕುರಿತು ಸಂಬಂಧಿಸಿದ ಅಧಿಕಾ-ರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

## ಜಿಲ್ಲಾ ಕ್ರೀಡಾಂಗಣದಲ್ಲಿ ದೇಶಿ ಕ್ರೀಡೆಗಳ ಕಲರವ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ನಡೆದ ದೇಶಿ ಕ್ರೀಡೆಗಳು ನಡೆದವು. ಸ್ಪರ್ಧೆಗಳಿಗೆ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಚಾಲನೆ ನೀಡಿದರು.**



ಜಿಲ್ಲೆಯ ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಮತ್ತು ಯುವಜನರು ಲಗೋರಿ ಮತ್ತು ಚಿನ್ನಿದಾಂಡು ಸ್ಪರ್ಧೆಗಳಲ್ಲಿ ಸುಮಾರು 804 ಸ್ಪರ್ಧಿಗಳು ತಲಾ 12 ಜನರು ಇರುವಂತೆ ಒಟ್ಟು 67 ತಂಡಗಳಾಗಿ ಭಾಗವಹಿಸಿ ಸ್ಪರ್ಧೆಯ ಮೆರಗು ಹೆಚ್ಚಿಸಿದರು. ಲಗೋರಿ ಸ್ಪರ್ಧೆಗೆ ಪುರುಷರ 17 ತಂಡಗಳು ಮತ್ತು ಮಹಿಳೆಯರ 16 ತಂಡಗಳು ಹಾಗೂ ಚಿನ್ನಿದಾಂಡು ಸ್ಪರ್ಧೆಗೆ ಪುರುಷರ 18 ತಂಡಗಳು ಹಾಗೂ ಮಹಿಳೆಯರ 16 ತಂಡಗಳು ಭಾಗಿಯಾಗಿದ್ದವು. ಈ ಸ್ಪರ್ಧೆಗಳ ಮೇಲುಸ್ತುವಾರಿ ವಹಿಸಿದ್ಧ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿ ವೀರೇಶ ನಾಯಕ, ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧಿಕಾರಿ ರಂಗಸ್ವಾಮಿ ಸೇರಿದಂತೆ ಅನೇಕರು ಇದ್ದರು.

# ಸ್ನೇಹ ಬೆಸೆದ ಎಳ್ಳು ಬೆಲ್ಲ

ನೈಜ್ಯ ದೆಸೆ ನ್ಯೂಸ್

**ಸೂರ್ಯ ತನ್ನ ಪಥ ಬದಲಿಸಿ, ಮತ್ತೊಂದು ಪಥದಲ್ಲಿ ಚಲಿಸುವ ಕಾಲ ಸಂಕ್ರಮಣ ಪ್ರಯುಕ್ತ ದೇಗುಲಗಳಲ್ಲಿ ಅಭಿಷೇಕ ಹಾಗೂ ವಿಶೇಷ ಪೂಜೆ ನಡೆಯಿತು. ಜಿಲ್ಲೆಯ ತಂಗಭದ್ರಾ ಹಾಗೂ ಕೃಷ್ಣೆಯ ನದಿ ತಟಗಳಲ್ಲಿ ಭಕ್ತರು ಪುಣ್ಯ ಸ್ನಾನ ಮಾಡಿ ಸೂರ್ಯದೇವನಿಗೆ ನಮಸ್ಕರಿಸಿದ ನಂತರ ದೇಗುಲಗಳಲ್ಲಿ ದರ್ಶನ ಪಡೆದರು. ನಗರದ ಚಂದ್ರಮೌಳೇಶ್ವರ ದೇವಸ್ಥಾನ, ವಿಷ್ಣು ದೇವಾಲಯಗಳಲ್ಲಿ ಭಕ್ತರ ಸಂಖ್ಯೆ ಅಧಿಕ ಇತ್ತು.**

ಸಂಕ್ರಮಣ ಪ್ರಯುಕ್ತ ಮಂತ್ರಾಲಯ ಸಮೀಪದ ತುಂಗಭದ್ರಾ ನದಿಯಲ್ಲಿ ಭಕ್ತರು ಪುಣ್ಯಸ್ನಾನ ಮಾಡಿ ಸರತಿ ಸಾಲಿನಲ್ಲಿ ನಿಂತು ರಾಯರ ದರ್ಶನ ಪಡೆದರು. ರಜೆ ಪ್ರಯುಕ್ತ ಭಾರಿ ಸಂಖ್ಯೆಯಲ್ಲಿ ಭಕ್ತರು ಆಗಮಸಿದ್ದರು.



ರೈತರು ತಮ್ಮ ಹೊಲದಲ್ಲಿ ಬೆಳೆದ ಹೊಸ ಭತ್ತ ಸೇರಿದಂತೆ ಧಾನ್ಯಗಳ ರಾಶಿ ಮಾಡಿ ಪೂಜೆ ಮಾಡಿದ ನಂತರ ಬಂಧು ಬಳಗದೊಂದಿಗೆ ಸಾಮೂಹಿಕವಾಗಿ ಭೋಜನ ಮಾಡಿ ಸಂತಸ ಹಂಚಿಕೊಂಡರು. ಅವರೆಕಾಳು, ಸಿಹಿಕುಂಬಳಕಾಯಿ ಇನ್ನಿತರ ಕಾಳು ಬಳಸಿ ಸಿದ್ಧಪಡಿಸಿದ ಖಾದ್ಯ ಸೇವಿಸಿದರು. ನಗರ ಪ್ರದೇಶಗಳಲ್ಲಿ ರೊಟ್ಟಿ ಅಂಗಡಿಗಳಿಂದ ಸಜ್ಜೆ ರೊಟ್ಟಿ, ಜೋಳದ ರೊಟ್ಟಿ, ಚಪಾತಿ, ಬದನೆಕಾಯಿ, ಪಲ್ಯ , ಮೊಸರು, ಶೇಂಗಾ ಚಟ್ನಿ ಖರೀದಿಸಿ ತಂದು ಮನೆಯಲ್ಲಿ ಹಬ್ಬ ಆಚರಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ಮಹಿಳೆಯರು ಬೆಳಿಗ್ಗೆ ಸಗಣಿಯಿಂದ ಅಂಗಳ ಸಾರಿಸಿ ರಂಗೋಲಿ ಬಿಡಿಸಿದ್ದರು. ಅದರ ಮಧ್ಯೆ ಮಣ್ಣಿನ ಉಂಡೆಗಳನ್ನು ಇಟ್ಟು ಅದಕ್ಕೆ ಗಜ್ಜರಿ ಹಾಗೂ ಹೂವು ಇಟ್ಟು ಅಲಂಕರಿಸಿದ್ದರು. ಕಬ್ಬು, ಬೆಲ್ಲ ಹಾಗೂ ಮೊಸರು ಗಡಿಗೆ ಚಿತ್ರ ಮೂಡಿಸಿ ಗಮನ ಸೆಳೆದರು. ನಗರದಲ್ಲಿ ಮನೆಯಂಗಳಲ್ಲಿ ಆಕರ್ಷಕ ರಂಗೋಲಿ ಚಿತ್ತಾರ ಮೂಡಿಸಿದ್ದರು. ಮಹಿಳೆಯರು ಹೊಸ ಸೀರೆ ತೊಟ್ಟು ಮನೆ ಮನೆಗೆ ತೆರಳಿ ಬುಂಧು ಮಿತ್ರರಿಗೆ ಎಳ್ಳುಬೆಲ್ಲ ಕೊಟ್ಟು ಶುಭ ಕೋರಿದರು. ಮಕ್ಕಳು ಸಹ ಚಿಕ್ಕ ಡಬ್ಬಿಗಳಲ್ಲಿ ಎಳ್ಳುಬೆಲ್ಲ ತುಂಬಿಕೊಂಡು ಮನೆ ಮನೆ ಹೋಗಿ ಎಳ್ಳುಬೆಲ್ಲ ವಿತರಿಸಿದರು. ಯುವಕರು ಹಾಗೂ ಮಕ್ಕಳು ಮೈದಾನಗಳಲ್ಲಿ ಗಾಳಿಪಟ ಹಾರಿಸಿ ಸಂಭ್ರಮಿಸಿದರು.

## ಮಾನ್ವಿ ಪಟ್ಟಣದಲ್ಲಿ ಕೆಎಸ್‌ಆರ್‌ಟಿಸಿ ಬಸ್-ಕಾರ್ ನಡುವೆ ಅಪಘಾತ; ಚಾಲಕ ಪ್ರಾಣಾಪಾಯದಿಂದ ಪಾರು



ನೈಜ್ಯ ದೆಸೆ ನ್ಯೂಸ್

**ಮಾನ್ವಿ:ಪಟ್ಟಣದ ಬಾಷುಮಿಯ್ಯ ಪದವಿ ಕಾಲೇಜ್ ಮುಂಭಾಗದಲ್ಲಿ ಶುಕ್ರವಾರ ಬೆಳಿಗ್ಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ) ಬಸ್ ಮತ್ತು ಕಾರ್ ನಡುವೆ ಸಂಭವಿಸಿದ ಅಪಘಾತದಲ್ಲಿ ಕಾರ್ ಚಾಲಕ ವೀರೇಶ್ ಪಲ್ಲೆದ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.**




ಕಾರಟಗಿ ಪಟ್ಟಣದಲ್ಲಿ ಜೆಸ್ಕಾಂ ಕಚೇರಿಯಲ್ಲಿ ಗುತ್ತಿಗೆದಾರನಾಗಿ ಕಾರ್ಯನಿರ್ವಹಿಸುತ್ತಿದ್ದ ಕಾರಟಗಿ ಮೂಲದ ವೀರೇಶ್ ಪಲ್ಲೆದ್ ಅವರು ಚಲಾಯಿಸುತ್ತಿದ್ದ ಕಾರ್‌ಗೆ ಸಾರಿಗೆ ಬಸ್ ಡಿಕ್ಕಿಯಾದ ಪರಿಣಾಮ ಅಪಘಾತ ಸಂಭವಿಸಿದೆ. ಘಟನೆಯಲ್ಲಿ ಚಾಲಕ ವೀರೇಶ್ ಅವರಿಗೆ ಅಲ್ಪಸ್ವಲ್ಪ ಗಾಯಗಳಾಗಿದ್ದು, ಸ್ಥಳಕ್ಕೆ ಆಗಮಿಸಿದ ಪೊಲೀಸ್ ಸಿಬ್ಬಂದಿ ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಮಾನ್ವಿ ತಾಲೂಕು ಆಸ್ಪತ್ರೆಗೆ ರವಾನಿಸಿದ್ದಾರೆ ಎಂದು ತಿಳಿದುಬಂದಿದೆ. ಅಪಘಾತದ ಕಾರಣಗಳ ಕುರಿತು ಪೊಲೀಸರು ಪರಿಶೀಲನೆ ಕೈಗೊಂಡಿದ್ದು, ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಳ್ಳಲಾಗಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ಶಿಕ್ಷಣದೊಂದಿಗೆ ಮಕ್ಕಳಿಗೆ ಉತ್ತಮ ಸಂಸ್ಕಾರ ಕಲಿಸಿ: ಪ್ರಭುಕುಮಾರ ಶ್ರೀ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಇವತ್ತು ಶಿಕ್ಷಣ ಸಂಸ್ಥೆಗಳು ಮಕ್ಕಳಿಗೆ ಕೇವಲ ಗುಣಮಟ್ಟದ ಶಿಕ್ಷಣ ಕೊಟ್ಟರೆ ಸಾಲದು ಅವ-ರಿಗೆ ಉತ್ತಮ ಸಂಸ್ಕಾರಗಳನ್ನೂ ಕೊಡುವ ಅಗತ್ಯವಿದೆ. ಬ್ರಿಲಿಯಂಟ್ ಸಂಸ್ಥೆ ಗುಣಮಟ್ಟದ ಶಿಕ್ಷಣದೊಂದಿಗೆ ಮಕ್ಕಳಿಗೆ ಒಳ್ಳೆಯ ಸಂಸ್ಕಾರ ಹಾಗೂ ಸಂಸ್ಕೃತಿಯನ್ನೂ ತಿಳಿಸಿಕೊಡುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದು ಕೋಲಾರ-ಬೇಲೂರ ಪಟ್ಟದೇವರು ಹಿರೇಮಠದ ಪೂಜ್ಯ ಶ್ರೀ ಪ್ರಭುಕುಮಾರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.**

ಶುಕ್ರವಾರ ಮೈಲೇಶ್ವರದ ಬ್ರಿಲಿಯಂಟ್ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢಶಾಲೆ ಆವರಣದಲ್ಲಿ ಹಮ್ಮಿಕೊಂಡ "ಬ್ರಿಲಿಯಂಟ್ ಕಲಾ ವೈಭವ" ಕಾರ್ಯಕ್ರಮದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಮಕ್ಕಳು ಮೊಬೈಲ್ ದಾಸರಾಗದಂತೆ ನೋಡಿಕೊಳ್ಳಿ ಇದ-ರಿಂದ ಹಲವಾರು ಸಮಸ್ಯೆಗಳು ಉದ್ಭವವಾಗುತ್ತಿವೆ,




ಅವರ ಮೇಲೆ ನಿಗಾಹ ವಹಿಸಿ ಅವರ ಭೋಗದ ಜೀವನಕ್ಕೆ ಕಡಿವಾಣ ಹಾಕಿ ಎಂದ ಅವರು ಹೆತ್ತವರ ಪಾದಪೂಜೆ ಕಾರ್ಯಕ್ರಮ ಇಟ್ಟುಕೊಂಡಿರುವುದು ಸಂಸ್ಥೆಗೆ ಪರಂಪರೆ ಕುರಿತು ಇರುವ ಕಾಳ-ಜಿಯನ್ನು ಎತ್ತಿ ತೋರಿಸುತ್ತದೆ.ಈ ಸಂಸ್ಥೆ ಭವಿಷ್ಯದಲ್ಲಿ ಇಡೀ ರಾಜ್ಯದಲ್ಲಿಯೇ ಒಂದು ಮಾದರಿ ಸಂಸ್ಥೆಯಾಗಿ ಬೆಳೆಯಲಿದೆ ಎಂದರು.

ಸಮಾರಂಭ ಉದ್ಘಾಟಿಸಿ ಮುದ್ದೇಬಿಹಾಳ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎಸ್.ಸಾವಳಗಿ ಅವರು ಮಾತನಾಡಿ ಶಿಕ್ಷಣದಿಂದಲೇ ಸಮಾಜದ ಸರ್ವಾಂಗೀಣ ಪ್ರಗತಿ ಸಾಧ್ಯ, ಮನುಷ್ಯನ ಸ್ವಾವಲಂಬಿ ಬದುಕಿಗೆ ಶಿಕ್ಷಣ ಅಗತ್ಯವಾಗಿದೆ, ಬ್ರಿಲಿಯಂಟ್ ಶಿಕ್ಷಣ ಸಂಸ್ಥೆ ಜಿಲ್ಲೆಯ ಮಾದರಿ ಸಂಸ್ಥೆಯಾಗಿದೆ ಇಲ್ಲಿಯ ಮಕ್ಕಳು ತಾಲೂಕಿನ ಕೀರ್ತಿಯನ್ನು ರಾಜ್ಯಮಟ್ಟದವ-ರಿಗೆ ತೆಗೆದುಕೊಂಡು ಹೋಗಿದ್ದಾರೆ ನಾನು ಸಂಸ್ಥೆಯ ಅಧ್ಯಕ್ಷರಿಗೆ,ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗಕ್ಕೆ ಅಭಿನಂದಿಸುತ್ತೇನೆ ಎಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಸ್ಥಳೀಯ ಸರ್ವಜ್ಞ ವಿದ್ಯಾ ಪೀಠದ ಅಧ್ಯಕ್ಷ ಸಿದ್ಧನಗೌಡ ಮಂಗಳೂರ ಮಾತನಾಡಿ ಈ ಕಾರ್ಯಕ್ರಮ ಶಿಕ್ಷಣ ಸಂಸ್ಥೆಗಳಿಗೆ ಒಂದು ಮಾದರಿಯಾಗಿದೆ.

ಇಲ್ಲಿಯ ಮಕ್ಕಳು ರಾಜ್ಯ ಮಟ್ಟದಲ್ಲಿ ಸಾಕಷ್ಟು ಹೆಸರನ್ನು ಮಾಡಿದ್ದಾರೆ, ಆದರೆ ಇವತ್ತು ಶಿಕ್ಷಣ ಸಂಸ್ಥೆಗಳನ್ನು ನಡೆಸುವುದು ಸುಲಭದ ಕೆಲಸವಲ್ಲ ಸಾಕಷ್ಟು ಸಮಸ್ಯೆಗಳು ಎದು-ರಿಸಬೇಕಾಗುತ್ತದೆ ಎಲ್ಲರ ಸಹಕಾರ ಇದ್ದಾಗ ಮಾತ್ರ ಶಿಕ್ಷಣ ಸಂಸ್ಥೆಗಳು ಬೆಳೆಯಲು ಸಾಧ್ಯ ಎಂದರು. ಕ್ಷೇತ್ರ ಸಮನ್ವಯಾಧಿಕಾರಿ ಆರ್ ಬಿ ದಮ್ಮೂರಮಠ, ಸಿ ಆರ್ ಸಿ ರಾಜು ವಿಜಾಪುರ ಹಾಗೂ ನಿರ್ದೇಶಕ ಎಸ್.ಎಚ್. ಪಾಟೀಲ ಮಾತನಾಡಿದರು. ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎನ್.ಬಿ. ನಡುವಿನಮನಿ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ 2024-25 ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಗರಿಷ್ಠ ಅಂಕ ಪಡೆದ ವಿದ್ಯಾರ್ಥಿಗಳಾದ ಭೀಮನಗೌಡ ಸೂಗೂರು, ರಫೀಕ್ ಮೋರಟಗಿ, ಶ್ರವಣ ಕುಮಾರ ಪೂಜಾರಿ, ಅಶ್ವಿನಿ ಹಿರೇಮಠ ಹಾಗೂ ಸುಮಿತ್ ಸುಣದಳ್ಳಿ ಇವರನ್ನು ಸನ್ಮಾನಿಸಲಾಯಿತು.

ಮು.ಗು. ಡಾ.ವಿನಾಯಕ್ ಪಟಗಾರ ವರದಿ ವಾಚಿಸಿದರು.ಶಿಕ್ಷಕ ಸಿದ್ದು ಕರಡಿ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಶಿಕ್ಷಣ ಸಂಯೋಜಕ ಎಸ್ ಎಸ್ ಹಿರೇಮಠ, ಸಿ ಆರ್ ಸಿ ರಾಜು ಮೂರಮಾನ,ಮು.ಗು.ಬಿ.ಜಿ.ಕರಕಳ್ಳಿ,ಎ.ಎಂ.ಕೋಳ್ಯಾಳ,ಆಡಳಿತ ಮಂಡಳಿ ಉಪಾಧ್ಯಕ್ಷ ಆರ್ ಬಿ ನಡುವಿನಮನಿ, ಕಾರ್ಯದರ್ಶಿ ಎಮ್ ಬಿ ಮಡಿವಾಳರ, ನಿರ್ದೇಶಕರಾದ ಎಸ್ ಎಚ್ ಪಾಟೀಲ, ಶಶಿಧರ್ ಎಂ ಬಿರಾದಾರ, ನಿರ್ದೇಶಕಿ ಎಲ್‌ಎಂ ಬಿರಾದಾರ, ಎನ್.ಎಸ್.ಗಡಗಿ, ಮುಖ್ಯೋಪಾಧ್ಯಾಯರು, ಬೋಧಕ ಭೋದಿಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು. ವೇದಿಕೆ ಕಾರ್ಯಕ್ರಮದ ನಂತರ ಸಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

## ನೇಮಕಾತಿ ಪ್ರಕಟಣೆ

KSRLPS ನೇಮಕಾತಿ 2026–11 ಕ್ಲಸ್ಟರ್ ಮೇಲ್ವಿಚಾರಕರು, ಕಚೇರಿ ಸಹಾಯಕ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ KSRLPS ನೇಮಕಾತಿ 2026: 11 ಕ್ಲಸ್ಟರ್ ಮೇಲ್ವಿಚಾರಕರು, ಕಚೇರಿ ಸಹಾಯಕರು, ಬ್ಲಾಕ್ ವ್ಯವಸ್ಥಾಪಕರು, ಜಿಲ್ಲಾ ವ್ಯವಸ್ಥಾಪಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಪ್ರಚಾರ ಸಂಘವು ಜನವರಿ 2026 ರ KSRLPS ಅಧಿಕೃತ ಅಧಿಸೂಚನೆಯ ಮೂಲಕ ಬ್ಲಾಕ್ ವ್ಯವಸ್ಥಾಪಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕೋಲಾರ, ಮಾಲೂರು, ಮುಳಬಾಗಿಲು, ಬಂಗಾರಪೇಟೆ, ಶ್ರೀನಿವಾಸಪುರ ಕರ್ನಾಟಕದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು ಜನವರಿ 30, 2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 15–01–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30–ಜನವರಿ–2026 ಅಧಿಕೃತ ವೆಬ್‌ಸೈಟ್: ksrlps.karnataka.gov.in

# ಪಾಮ್ ಆಯಿಲ್ ಟ್ಯಾಂಕರ್ ಲಾರಿ ನಿಯಂತ್ರಣ ತಪ್ಪಿಅಪಘಾತ

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ: ಪಾಮ್ ಆಯಿಲ್ ಸಾಗಿಸುತ್ತಿದ್ದ ಟ್ಯಾಂಕರ್ ಲಾರಿಯೊಂದು ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾಗಿ ಅಪಘಾತಕ್ಕೀಡಾದ ಘಟನೆ ಬಳ್ಳಾರಿ ಜಿಲ್ಲೆಯ ಕಂಪ್ಲಿ ತಾಲೂಕಿನ ದೇವಲಾಪುರ ಕಣಿವೆ ಪ್ರದೇಶದಲ್ಲಿ ನಡೆದಿದೆ.**

ಟ್ಯಾಂಕರ್ ಪಲ್ಟಿಯಾದ ಕೆಲವೇ ಕ್ಷಣಗಳಲ್ಲಿ ಸುತ್ತಮುತ್ತಲಿನ ಗ್ರಾಮಸ್ಥರು ಬಕೆಟ್, ಚೊಂಬು, ಬಿಂದಿಗೆ, ಡಬ್ಬಾ ಹಿಡಿದು ಸ್ಥಳಕ್ಕೆ ಆಗಮಿಸಿದ್ದು, ಎಣ್ಣೆ ಸಂಗ್ರಹಿಸಿಕೊಳ್ಳಲು ಜನರು ಮುಗಿಬಿದ್ದ ದೃಶ್ಯ ಕಂಡು ಬಂದಿದೆ. ದೇವಲಾಪುರ ಕಣಿವೆಯಲ್ಲಿರುವ ತೀವ್ರ ತಿರುವಿನಲ್ಲಿ ಲಾರಿ ವೇಗ ನಿಯಂತ್ರಣ ತಪ್ಪಿ ಉರುಳಿಬಿದ್ದಿದೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಟ್ಯಾಂಕರ್ ಪಲ್ಟಿಯಾದ ರಭಸಕ್ಕೆ ಲಾರಿಗೆ ಹಾನಿಯಾಗಿದ್ದು, ಒಳಗಿದ್ದ ಸಾವಿರಾರು ಲೀಟರ್ ಪಾಮ್ ಆಯಿಲ್ ರಸ್ತೆ ಮೇಲೆ ಹಾಗೂ ಪಕ್ಕದ ಜಾಗಗಳಿಗೆ ಹರಿದುಹೋಗಿದೆ.



ಘಟನೆಯ ಸಮಯದಲ್ಲಿ ಟ್ಯಾಂಕರ್‌ನಲ್ಲಿ ಚಾಲಕ ಹಾಗೂ ಕ್ಲೀನರ್ ಇದ್ದರು. ಆದರೆ ಅದೃಷ್ಟವಶಾತ್ ಇಬ್ಬರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಸ್ಥಳೀಯರು ಹಾಗೂ ವಾಹನ ಸವಾರರು ತಕ್ಷಣವೇ ಅವರಿಗೆ ಸಹಾಯ ಮಾಡಿದ್ದಾರೆ. ಗಾಯಾಳುಗಳನ್ನು ಸಮೀಪದ ಆರೋಗ್ಯ ಕೇಂದ್ರಕ್ಕೆ ಕರೆದೊಯ್ಯಲಾಗಿದ್ದು, ಅವರ ಸ್ಥಿತಿ ಸ್ಥಿರವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ. ಟ್ಯಾಂಕರ್ ಪಲ್ಟಿಯಾದ ಸುದ್ದಿ ಹರಡುತ್ತಿದ್ದಂತೆ, ಸಮೀಪದ ದೇವಲಾಪುರ, ಕಂಪ್ಲಿ ಹಾಗೂ ಇತರ ಗ್ರಾಮಗಳಿಂದ ಜನರು ಸ್ಥಳಕ್ಕೆ ಆಗಮಿಸಿದರು. ವಿಶೇಷವಾಗಿ ಮಹಿಳೆಯರು ಪ್ಲಾಸ್ಟಿಕ್ ಬಿಂದಿಗೆ, ಬಕೆಟ್, ಡಬ್ಬಾ ಹಿಡಿದು ರಸ್ತೆ ಮೇಲೆ ಹರಿದ ಪಾಮ್ ಆಯಿಲ್ ಸಂಗ್ರಹಿಸಲು ಮುಗಿಬಿದ್ದರು.

ಕೆಲವರು ರಸ್ತೆ ಮಧ್ಯೆಯಲ್ಲೇ ನಿಂತು ಎಣ್ಣೆ ತುಂಬಿಸಿಕೊಂಡು ಹೋಗುತ್ತಿದ್ದ ದೃಶ್ಯಗಳು ಕಂಡುಬಂದವು. ಘಟನೆಯ ಮಾಹಿತಿ ತಿಳಿದ ತಕ್ಷಣ ಕಂಪ್ಲಿ ಪೊಲೀಸ್ ಠಾಣೆಯ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಪರಿಸ್ಥಿತಿಯನ್ನು ನಿಯಂತ್ರಿಸಲು ಹರಸಾಹಸ ಪಟ್ಟರು. ಜನರನ್ನು ದೂರ ಸರಿಸಲು ಪೊಲೀಸರು ಹಲವು ಬಾರಿ ಮನವಿ ಮಾಡಬೇಕಾಯಿತು. ರಸ್ತೆ ಮೇಲೆ ಹೆಚ್ಚಾಗಿದ್ದ ಜನಸಂದಣಿಯಿಂದ ಕೆಲಕಾಲ ವಾಹನ ಸಂಚಾರ ಅಸ್ತವ್ಯಸ್ತಗೊಂಡಿತು. ಪೊಲೀಸರ ಸೂಚನೆಯ ಮೇರೆಗೆ ಅಗ್ನಿಶಾಮಕ ದಳ ಹಾಗೂ ಸಂಬಂಧಪಟ್ಟ ಇಲಾಖೆ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ, ರಸ್ತೆ ಮೇಲೆ ಹರಿದಿದ್ದ ಎಣ್ಣೆಯನ್ನು ಸ್ವಚ್ಛಗೊಳಿಸುವ ಕಾರ್ಯಕ್ಕೆ ಮುಂದಾದರು. ಸುರಕ್ಷತಾ ಕ್ರಮವಾಗಿ ಕೆಲಕಾಲ ರಸ್ತೆ ಸಂಚಾರವನ್ನು ಸಂಪೂರ್ಣವಾಗಿ ತಡೆಹಿಡಿಯಲಾಯಿತು. ಬಳಿಕ ಎಣ್ಣೆ ತೆರವು ಕಾರ್ಯ ಮುಗಿದ ನಂತರ ವಾಹನ ಸಂಚಾರ ಪುನಃ ಆರಂಭವಾಯಿತು.

## ರಂಗಾಪೂರ ಶಾಲೆಯ ನೂತನ ಎಸ್‌ಡಿಎಂಸಿ ರಚನೆ

❑ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ತಾಲೂಕಿನ ರಂಗಾಪೂರು ಗ್ರಾಮದಲ್ಲಿರುವ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ ಎಸ್‌ಡಿಎಂಸಿಯನ್ನು ರಚಿಸಲಾಗಿದೆ ಎಂದು ಶಾಲೆಯ ಮುಖ್ಯ ಶಿಕ್ಷಕ ಗಂಗನಗೌಡ ತಿಳಿಸಿದರು.**



ಕ್ಷೇತ್ರ ಶಿಕ್ಷಣಾಧಿಕಾರಿಯಾದ ಬಸವಲಿಂಗಪ್ಪ ನೂತನ ಎಸ್‌ಡಿಎಂಸಿ ಅಧ್ಯಕ್ಷರನ್ನಾಗಿ ತಿಮ್ಮಣ್ಣ ನಾಯಕ, ಉಪಾಧ್ಯಕ್ಷರನ್ನಾಗಿ ಗೀತಾ ಶರಣಪ್ಪ ಅವರನ್ನು ಆಯ್ಕೆ ಮಾಡಿದ್ದಾರೆ. ಈ ಸಂದರ್ಭದಲ್ಲಿ ಗೋವಿಂದಪ್ಪ ನಾಯಕ, ರಾಮಣ್ಣ, ಬಸವರಾಜ, ತಿಮ್ಮಯ್ಯ, ಕುಬೇರಪ್ಪ ಸೇರಿದಂತೆ ಶಾಲೆಯ ಸಹ ಶಿಕ್ಷಕರಿದ್ದರು. ಮಸ್ಕಿ ತಾಲೂಕಿನ ರಂಗಾಪೂರು ಗ್ರಾಮದ ಸರ್ಕಾರಿ ಶಾಲೆಯ ನೂತನ ಎಸ್‌ಡಿಎಂಸಿ ರಚಿಸಲಾಗಿದೆ.

# ಹಬ್ಬಗಳು ಸಂಸ್ಕೃತಿಯ ಪ್ರತೀಕ: ಶಿಕ್ಷಕಿ ಕೋಳೂರ



❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಹಬ್ಬಗಳು ನಮ್ಮ ಸಂಸ್ಕೃತಿಯ ಪ್ರತೀಕವಾಗಿವೆ ಎಲ್ಲಾ ಹಬ್ಬಗಳ ಹಿಂದೆ ಒಂದು ಶ್ರೇಷ್ಠ ಸಂದೇಶವಿದೆ ಅದನ್ನು ನಾವು ತಿಳಿದುಕೊಳ್ಳುವ ಅಗತ್ಯವಿದೆ.ಮಕರ ಸಂಕ್ರಾಂತಿ ಪರಸ್ಪರ ಬಾಂಧವ್ಯ ಬೆಸೆದು ಪ್ರೀತಿ ವಿಶ್ವಾಸವನ್ನು ಹೆಚ್ಚಿಸುವ ಹಬ್ಬವಾಗಿದೆ ಎಂದು ಬಿ.ಸಾಲವಾಡಗಿ ಪ್ರೌಢಶಾಲೆ ಮುಖ್ಯ ಶಿಕ್ಷಕಿ, ಸಾಹಿತಿ ಸುಮಂಗಲಾ ಕೋಳೂರ ಹೇಳಿದರು.**

ಗುರುವಾರ ಪಟ್ಟಣದ ಎಸ್ ಕೆ ಬಡಾವಣೆಯ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನದ ಆವರಣದಲ್ಲಿ ಹಮ್ಮಿಕೊಂಡ ಸಂಕ್ರಮಣದ ವಿಶೇಷ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕಳೆದ ಕೆಲವು ವರ್ಷಗಳಿಂದ ಈ ಬಡಾವಣೆಯ ನಮ್ಮೆಲ್ಲ ಸಹೋದರಿಯರು ಕೂಡಿಕೊಂಡು ವಿಶೇಷ ರೀತಿಯಲ್ಲಿ ಹಬ್ಬಗಳನ್ನು ಆಚರಿಸುತ್ತಾ ಬಂದಿದ್ದೇವೆ ಹಬ್ಬಗಳನ್ನು ಕೇವಲ ಮನರಂಜನೆಗೆ ಸೀಮಿತಗೊಳಿಸದೆ ಹಿನ್ನೆಲೆಯನ್ನು ತಿಳಿದುಕೊಳ್ಳುವ ಉದ್ದೇಶದಿಂದ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದೇವೆ ಇದಕ್ಕೆ ನಮ್ಮೆಲ್ಲ ಸಹೋದರಿಯರು ಸಹಕರಿಸುತ್ತಿದ್ದಾರೆ ಅವರಿಗೆ ಅಭಿನಂದಿಸುತ್ತೇನೆ ಎಂದರು.

ಈ ಸಂದರ್ಭದಲ್ಲಿ ಸೇರಿದ ಬಡಾವಣೆಯ ನೂರಾರು ಮಹಿಳೆಯರು ಎಳ್ಳು ಬೆಲ್ಲ ಸಿಹಿವಿತರಿಸಿ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡು ಸಂಭ್ರಮಿಸಿದರು. ಕಾರ್ಯಕ್ರಮದಲ್ಲಿ ಶರಣೆ ಶಾಂತಮ್ಮ ತಾಯಿ ಕೋಳೂರ, ಶರಣೆ ಕಾಶಿಬಾಯಿ ಬಂಟನೂರ, ಶರಣೆ ದೇವಕ್ಕಮ್ಮ ಮದರಕಲ್, ಸುನಂದಾ ಪಾಟೀಲ, ವಿಜಯಲಕ್ಷ್ಮಿ ಕೆಸರಭಾವಿ, ರಾಜೇಶ್ವರಿ ಪಾಟೀಲ, ಪ್ರತಿಭಾ ಬಿರಾದಾರ, ಶಕುಂತಲಾ ದೇಸಾಯಿ, ಸುಮಾ ಮದುಕಲ್, ಗಣ್ಯರಾದ ಮಲ್ಲನಗೌಡ ಪಾಟೀಲ, ಭೀಮನಗೌಡ ದ್ಯಾಪೂರ, ಮತ್ತಿತರರು ಇದ್ದರು.

## ಸಂಗೀತದಲ್ಲಿದೆ ಅದ್ಭುತ ಶಕ್ತಿ

❑ ನೈಜ್ಯ ದೆಸೆ ನ್ಯೂಸ್

**ಸಂಗೀತ ಪ್ರತಿಯೊಬ್ಬರ ಮನಸ್ಸು ಸೆರೆ ಹಿಡಿಯುವುದರ ಜತೆಗೆ ಅದ್ಭುತ ಶಕ್ತಿ ಹೊಂದಿದೆ. ಸಂಗೀತದ ಗಾನಯಾನದಲ್ಲಿ ನೂರಾರು ಸಂಗೀತ ಪ್ರೇಮಿಗಳು ತೇಲಿದಂತಾಯಿತು. ಇಂತಹದೊಂದು ಅವಕಾಶ ದೊರಕಿದ್ದು ಈ ಭಾಗದ ಸ್ವಾತಂತ್ರ್ಯ ಯೋಧ–ಹುತಾತ್ಮ ಅಪ್ಪಾರಾವ ಪಾಟೀಲ ಮಹಾಗಾಂವ್ ಜನ್ಮ ಶತಮಾನೋತ್ಸವ ನಿಮಿತ್ತ ಹುತಾತ್ಮ ಅಪ್ಪಾರಾವ ಪಾಟೀಲ ಮಹಾಗಾಂವ ಫೌಂಡೇಶನ್ ವತಿಯಿಂದ ನಗರದ ಕನ್ನಡ ಸಾಹಿತ್ಯ ಪರಿಷತ್ತಿನ ಅಂಗಳದಲ್ಲಿ ಶುಕ್ರವಾರ ಸುಮಾರು ಎರಡು ಗಂಟೆಗಳ ಕಾಲ ನಡೆದ ಕನ್ನಡ ಗೀತೆಗಳ ಗಾನ ಮಾಧುರ್ಯದಲ್ಲಿ ಪ್ರೇಕ್ಷಕರಿಗೆ ರಸದೌತಣ ಉಣಬಡಿಸಿದಂತಾಯಿತು.**



ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಕಸಾಪ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಸ್ವಾತಂತ್ರ್ಯ ಸಂಗ್ರಾಮ ಹಾಗೂ ನಿಜಾಮನ ವಿರುದ್ಧ ತೊಡೆತಟ್ಟಿ ಭಾರತೀಯ ಸ್ವಾತಂತ್ರ್ಯಕ್ಕಾಗಿ ಶ್ರಮಿಸಿದ ಅಪ್ಪಾರಾವ್ ಪಾಟೀಲ್ ಮುಂಚೂಣಿ ನಾಯಕರು. ಅವರ ತ್ಯಾಗ, ಹೋರಾಟದ ಕಿಚ್ಚು ಈ ಭಾಗದ ಜನ ಶಾಶ್ವತವಾಗಿ ಸ್ಮರಿಸುತ್ತಾರೆ ಎಂದರು.ಫೌಂಡೇಷನ್ ಕಾರ್ಯದರ್ಶಿಗಳೂ ಆದ ವಿಜ್ಞಾನ ಡಾ.ಬಿ.ಎ.ಪಾಟೀಲ ಮಹಾಗಾಂವ ಮಾತನಾಡಿ, ಚಿಕ್ಕ ವಯಸ್ಸಿನಲ್ಲಿ ದೇಶದ ರಕ್ಷಣೆಗೆ ಹೋಗಿ ತನ್ನ ಅಮೂಲ್ಯವಾದ ಪ್ರಾಣವನ್ನೇ ಕೊಟ್ಟ ಧೀಮಂತ ವೀರ ಅಪ್ಪಾರಾವ ಪಾಟೀಲ ಮಹಾಗಾಂವ. ಇಂತಹ ದೇಶ ಸೇವಕನನ್ನು ಇಂದಿನ ಯುವಜನತೆ ಪ್ರೇರಣೆಯಾಗಿಸಿಕೊಳ್ಳಬೇಕೆಂದು ಹೇಳಿದರು.ಫೌಂಡೇಶನ್ ಅಧ್ಯಕ್ಷರೂ ಆದ ಸ್ವಾತಂತ್ರ್ಯ ಯೋಧ ದಯಾನಂದ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಸಂಗೀತ ಕಲಾವಿದ ಮಧುಸೂದನ್ ಮಲ್ಲಾಬಾದಿ, ಜಿಲ್ಲಾ ಕಸಾಪದ ಧರ್ಮಣ್ಣ ಧನ್ನಿ, ಶರಣರಾಜ ಛಪ್ಪರಬಂದಿ, ಪರಮಾನಂದ ಸರಸಂಬಿ ಮಾತನಾಡಿದರು. ಧರ್ಮರಾಜ ಜವಳಿ, ಮಹಾಲಿಂಗಯ್ಯ ಸ್ವಾಮಿ, ಮಹಾಂತಗೌಡ ಪಾಟೀಲ ಹರವಾಳ, ಲಲಿತಾ ಪಾಟೀಲ್ ಇತರರಿದ್ದರು. " ಕಲ್ಯಾಣ ಕರ್ನಾಟಕ ಪ್ರದೇಶದ ಸ್ವಾತಂತ್ರ್ಯ ಹೋರಾಟಗಾರರ ಜೀವನ ಚರಿತ್ರೆ ಶಾಲಾ ಪಠ್ಯದಲ್ಲಿ ಸೇರ್ಪಡೆ ಮಾಡುವುದು ಇಂದಿನ ಜರೂರಿ. ವಿಜಯಕುಮಾರ ಪಾಟೀಲ್ ತೇಗಲತಿಪ್ಪಿ, ಅಧ್ಯಕ್ಷ, ಕಸಾಪ ಕಲಬುರಗಿ.

# ಎಂಎಸ್‌ಪಿ ಅಡಿ ಬಿಳಿ ಜೋಳ ಖರೀದಿ

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ: '2025–26ನೇ ಸಾಲಿನ ಮುಂಗಾರು ಋತುವಿನ ಬಿಳಿ ಜೋಳವನ್ನು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ನೇರವಾಗಿ ಖರೀದಿಸಲಾಗುವುದು' ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.**

ಜೋಳವನ್ನು ಮಾರಾಟ ಮಾಡಲು ರೈತರು ಮೊದಲು ಕೃಷಿ ಇಲಾಖೆಯ ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ಮಾಡಿಕೊಳ್ಳಬೇಕು. ನಂತರ ಆಯಾ ತಾಲ್ಲೂಕುಗಳ ಕೃಷಿ ಉತ್ಪನ್ನ ಮಾರುಕಟ್ಟೆ, ತಾಲ್ಲೂಕು ಕೃಷಿ ಉತ್ಪನ್ನ ಸಹಕಾರ ಮಾರಾಟ ಸಂಘ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ತಾಲ್ಲೂಕು ಕೇಂದ್ರ ಕಚೇರಿಗಳಲ್ಲಿ ತೆರೆಯಲಾಗುವ ಖರೀದಿ ಕೇಂದ್ರಗಳಲ್ಲಿ ಜೋಳ ಮಾರಾಟ



ಮಾಡಲು ನೋಂದಾಯಿಸಿಕೊಳ್ಳಬೇಕು' ಎಂದು ಅವರು ತಿಳಿಸಿದ್ದಾರೆ. ಈಗಾಗಲೇ 2025–26ನೇ ಸಾಲಿನ ಮುಂಗಾರು ಋತುವಿನ ಬಿಳಿಜೋಳ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿದೆ. ಬಿಳಿ ಜೋಳ–ಹೈಬ್ರೀಡ್: 3,699 (ಪ್ರತಿ ಕ್ವಿಂಟಲ್‌ಗೆ), ಮಾಲ್ದಂಡಿ: 3,749 ನಿಗದಿ ಮಾಡಲಾಗಿದೆ.

ಖರೀದಿ ಕೇಂದ್ರಗಳ ವಿವರ: ಬಳ್ಳಾರಿ ತಾಲ್ಲೂಕಿನ ತಾಲ್ಲೂಕು ವ್ಯವಸಾಯ ಉತ್ಪನ್ನ ಸಹಕಾರ ಸಂಘ, ಬಳ್ಳಾರಿ ಮತ್ತು ಮೋಕಾ, ಅಸುಂಡಿ, ರೂಪನಗುಡಿ, ಅಮರಾಪುರ ಗ್ರಾಮಗಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಕುರುಗೋಡು ತಾಲ್ಲೂಕಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಸಿರುಗುಪ್ಪ ತಾಲ್ಲೂಕಿನ ಕೆ.ಬೆಳಗಲ್ಲು, ಕರೂರು, ಹಚ್ಚೊಳ್ಳಿ, ಬೂದುಗುಪ್ಪ, ಬಿ.ಎಂ.ಸೂಗೂರು, ತಾಳೂರು, ಮುದ್ದಟನೂರು, ಅರಳಿಗನೂರು, ಸಿರಿಗೇರಿ ಗ್ರಾಮಗಳ ಪ್ರಾಥ–'ಮಿಕ ಕೃಷಿ ಪತ್ತಿನ ಸಹಕಾರ ಸಂಘ, ಕಂಪ್ಲಿ ತಾಲ್ಲೂಕಿನ ತಾಲ್ಲೂಕು ವ್ಯವಸಾಯ ಉತ್ಪನ್ನ ಸಹಕಾರ ಸಂಘ, ಕಂಪ್ಲಿ ಮತ್ತು ಎಮ್ಮಿಗನೂರು ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಖರೀದಿ ಕೇಂದ್ರ ತೆರಯಲಾಗುತ್ತಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕುಗಳ ಖರೀದಿ ಕೇಂದ್ರಗಳಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಪೈದೊಡ್ಡಿ ಗ್ರಾಮದ ನೀರಿನ ಸಮಸ್ಯೆ ಪರಿಹರಿಸುವಂತೆ ಕರವೇ ಪ್ರತಿಭಟನೆ



❑ ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಜ 17 ಪೈದೊಡ್ಡಿ ಗ್ರಾಮದ ನೀರಿನ ಸಮಸ್ಯೆಯನ್ನು ಪರಿಹರಿಸುವಂತೆ ಆಗ್ರಹಿಸಿ ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಕಾರ್ಯಾಲಯದ ಮುಂದೆ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ನೇತೃತ್ವದಲ್ಲಿ ಗ್ರಾಮಸ್ಥರು ಪ್ರತಿಭಟನೆ ಮಾಡಿದರು.**

ಪೈದೊಡ್ಡಿ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಂಡಿದೆ. ಚಳಿಗಾಲದಲ್ಲಿಯೇ ಈ ಪರಿಯ ನೀರಿನ ಸಮಸ್ಯೆ ಯಾದರೆ, ಇನ್ನು ಮುಂಬರುವ ಬೇಸಿಗೆ ದಿನಗಳಲ್ಲಿ ಗ್ರಾಮದ ಜನತೆಯ ಪರಿಸ್ಥಿತಿ ನೆನದರೆ ಮೈ ಜುಮ್ಮ ಎನ್ನುತ್ತದೆ. ಅಂತಹ ಬೀಕರ ಪರಿಸ್ಥಿತಿ ಪೈದೊಡ್ಡಿ ಗ್ರಾಮದಲ್ಲಿದೆ. ಈ ಬಗ್ಗೆ 9 ಜನವರಿ 2026 ರಂದು ತಾಲೂಕು ಪಂಚಾಯತಿ ಸಾಮಾನ್ಯ ಸಭೆಯಲ್ಲಿ ನಮ್ಮ ಸಂಘಟನೆ ಮೌಖಿಕವಾಗಿ ತಮ್ಮ ಬಳಿ ಪೈದೊಡ್ಡಿ ಗ್ರಾಮದ ನೀರಿನ ಸಮಸ್ಯೆ ಪರಿಹರಿಸುವಂತೆ ಮನವಿ ಮಾಡಲಾಗಿತ್ತು. ಇನ್ನು 2 ದಿನಗಳಲ್ಲಿ ಗ್ರಾಮದ ಕುಡಿಯುವ ನೀರಿನ ಸಮಸ್ಯೆ ಪರಿಹರಿಸುತ್ತೇವೆಂದು ಮೌಖಿಕವಾಗಿ ಭರವಸೆ ನೀಡಿದ್ದೀರಿ.

ಆದರೆ ವಾರ ಕಳೆದರು ಇಲ್ಲಿಯವರೆಗೆ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ, ಕಳೆದ 1 ತಿಂಗಳಿಂದ ಗ್ರಾಮದ ಜನತೆ ಕುಡಿಯುವ ನೀರಿನ ತೀವ್ರ ಸಮಸ್ಯೆ ಎದುರಿಸುತ್ತಿದ್ದಾರೆ. ಅಲ್ಲದೇ ಗ್ರಾಮ ಪಂಚಾಯತಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಈ ಬಗ್ಗೆ ತಲೆ ಕೆಡಿಸಿಕೊಳ್ಳದೇ ಮೌನಕ್ಕೆ ಶರಣಾಗಿದ್ದಾರೆ. ನೀರಿನ ಸಮಸ್ಯೆ ಬಗ್ಗೆ ಹಲವಾರು ಬಾರಿ ಮನವಿ ಮಾಡಿದರು ನಮ್ಮ ಮನವಿಗೆ ಸ್ಪಂದಿಸುತ್ತಿಲ್ಲ, ಕಾರಣ ಗ್ರಾಮದ ಜನತೆ, ಗ್ರಾಮ ಪಂಚಾಯತಿ ಸದಸ್ಯರು ಹಾಗೂ ನಮ್ಮ ಸಂಘಟನೆಯ ಪದಾಧಿಕಾರಿಗಳು ನೀರಿನ ಸಮಸ್ಯೆ ಪರಿಹರಿಸುವವರೆಗೂ ನಮ್ಮ ಪ್ರತಿಭಟನೆಯನ್ನು ಹಿಂದೆ ತೆಗೆದುಕೊಳ್ಳುವುದಿಲ್ಲವೆಂದು ಪಟ್ಟುಹಿಡಿದ್ದಿದ್ದರು. ಈ ಸಂದರ್ಭದಲ್ಲಿ ಸಂಘಟನೆಯ ಅಧ್ಯಕ್ಷ ಜಿಲಾನಿಪಾಷಾ, ರವಿಕುಮಾರ ಬರಗುಡಿ, ಆಜಿಜ್ ಪಾಷಾ, ಮೋಸಿನ್ ಖಾನ್, ಅಲ್ಲಾವುದ್ದೀನ್. ತಿಮ್ಮನಗೌಡ, ಮಲ್ಲ, ಮರೆಪ್ಪ, ಬಾಬು, ವಿರೇಶ ಹಿರೇಮಠ, ಪ್ರಭುಗೌಡ, ಪರಮಣ್ಣ ಸೇರಿ ಗ್ರಾಮಸ್ಥರು ಇದ್ದರು.

# ಶೈಕ್ಷಣಿಕ ಸಲುವಾಗಿ ಕಲಿಕೆಯ ಕಲ್ಯಾಣ ಅಭಿಯಾನ :ಅಬುಬಕರ್

❑ ನೈಜ್ಯ ದೆಸೆ ನ್ಯೂಸ್

**ಲಿಂಗಸುಗೂರು: ಕಲ್ಯಾಣ ಕರ್ನಾಟಕದಲ್ಲಿ 371 (ಜೆ) ಜಾರಿಯಾಗಿ ದಶಕಗಳು ಕಳೆದರು ಶೈಕ್ಷಣಿಕ ಸೌಲಭ್ಯಗಳಿಲ್ಲದೇ ಈ ಭಾಗದ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ತುಂಬ ಹಿಂದುಳಿಯುವಂತಾಗಿದೆ ಎಂದು ಸ್ಟೂಡೆಂಟ್ಸ್ ಇಸ್ಲಾಮಿಕ್ ಆರ್ಗನೈಸೇಷನ್ ಆಫ್ ಇಂಡಿಯಾದ ರಾಜ್ಯ ಕಾರ್ಯದರ್ಶಿ ಅಬುಬಕರ್ ಸಿದ್ದಿಕಿ ಆರೋಪಿಸಿದರು.**

ಲಿಂಗಸುಗೂರು ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ಧಿಗೋಷ್ಠಿಯನ್ನು ನಡೆಸಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಪ್ರದೇಶದ ಗಂಭೀರ ಶೈಕ್ಷಣಿಕ ಬಿಕ್ಕಟ್ಟನ್ನು ಎದು–




ರಿಸಲು, ಸ್ಟೂಡೆಂಟ್ಸ್ ಇಸ್ಲಾಮಿಕ್ ಆರ್ಗನೈಸೇಷನ್ ಆಫ್ ಇಂಡಿಯಾ ಹಾಗೂ ಕರ್ನಾಟಕ ರಾಜ್ಯ ಘಟಕ ಸೆಂಟರ್ ಫಾರ್ ಎಜುಕೇಷನಲ್ ರಿಸರ್ಚ್ ಅನಾಲಿಸಿಸ್ ಸಹಯೋಗದಲ್ಲಿ "ಕಲಿಕೆಯೇ ಕಲ್ಯಾಣ" ಅಭಿಯಾನವನ್ನು ಆರಂಭಿಸಲಾಗಿದೆ. ಕಲ್ಯಾಣ ಕರ್ನಾಟಕ ಪ್ರದೇಶದ ಕೊಪ್ಪಳ, ರಾಯಚೂರು, ಕಲಬುರಗಿ, ಯಾದಗಿರಿ, ಬೀದರ್, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಶಿಕ್ಷಣದಲ್ಲಿ ತೀರ ವಿದ್ಯಾರ್ಥಿಗಳು ತೀರ ಹಿಂದುಳಿದಿದ್ದಾರೆ. ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿನ ಫಲಿತಾಂಶ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಎಷ್ಟರಮಟ್ಟಿಗೆ ಇದೆ ಎಂದು ತಿಳಿಸುತ್ತದೆ.

ಅಲ್ಲದೇ ಈ ಭಾಗದಲ್ಲಿ 21,000 ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಈ ಮೇಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಸರ್ಕಾರಿ ಹಾಗೂ ಮೌಲಾನಾ ಆಜಾದ್ ಶಾಲೆಗಳನ್ನು ಗಮನದಲ್ಲಿಟ್ಟುಕೊಂಡು ಸಮುದಾಯ ಕೇಂದ್ರಿತ ಕಾರ್ಯತಂತ್ರವನ್ನು ರೂಪಿಸಲಾಗಿದೆ. ಸಾರ್ವಜನಿಕರಲ್ಲಿ ಶಿಕ್ಷಣದ ಮಹತ್ವದ ಬಗ್ಗೆ ಅರಿವು ಮೂಡಿಸುವುದು, ಸಮುದಾಯದ ಬೆಂಬಲದಿಂದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಪರೀಕ್ಷೆಯಲ್ಲಿ ಅನುತ್ತೀರ್ಣ ಮಟ್ಟವನ್ನು ತಗ್ಗಿಸುವುದು ಉದ್ದೇಶದಿಂದ ಈ ಅಭಿಯಾನವನ್ನು ಆರಂಭಿಸಲಾಗಿದ್ದು, ಸಾರ್ವಜನಿಕರು, ಶೈಕ್ಷಣಿಕ ರಂಗದಲ್ಲಿ ಕಾರ್ಯನಿರ್ವಹಿಸುವವರು, ರಾಜಕಾರಣಿಗಳು ಈ ಅಭಿಯಾನವನ್ನು ಬೆಂಬಲ ನೀಡಿ ಯಶಸ್ವಿಗೊಳಿಸಬೇಕೆಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾಧ್ಯಕ್ಷ ಇಮ್ತಿಯಾಜ್, ತಾಲೂಕು ಅಧ್ಯಕ್ಷ ಅಮೀರ್ ಅಲ್ಲಾಭಕ್ಷ, ಅಬ್ದುಲ್ ನಹೀಂ, ಮೌಲಾನಾ ಅಬು ಸೈಯದ್ ಖಾಸ್ಮೀ ಸೇರಿ ಇತರರು ಇದ್ದರು.

